ಆ) ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಸ್ವಂತ ನಿವೇಶನ ಹೊಂದಿರುವ ಪಕ್ಕಾ ಖಾತೆ ನಮೂನೆ-9 ನಮೂದಾಗಿರುವ ಫಲಾನುಭವಿಗಳನ್ನು ಆಯ್ಕೆ ಮಾಡಿ ವಸತಿಯನ್ನು ಕಲ್ಪಿಸಲಾಗುತ್ತಿದೆ. (ಗ್ರಾಮಠಾಣ ನಿವೇಶನ) ಪಕ್ಕಾ ನಮೂನೆ-9ರಲ್ಲಿ ನಮೂದು ಇರದ ಫಲಾನುಭವಿಗಳಿಗೆ ವಸತಿ ಸೌಕರ್ಯ ಕಲ್ಪಿಸಿ ಸಾಲದ ಹಣ ಬಿಡುಗಡೆ ಮಾಡುತ್ತಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

790 ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ವಸತಿ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪೂರ ಜಿಲ್ಲೆಯ ಬಸವನಬಾಗೇವಾಡಿ ಮತಕ್ಷೇತ್ರದ, ಆಲಮಟ್ಟಿ, ನಿಡಗುಂದಿ, ಬದವನಬೇಗೇವಾಡಿ, ಕೋಲ್ಹಾರ, ಮುಂತಾದ ಗ್ರಾಮಗಳಲ್ಲಿ ವಾಸವಾಗಿರುವ ಸುಡಗಾಡಸಿದ್ದರು, ಕೊಂಚಿಕೊರವರು, ಪೊತರಾಜರು ಸೇರಿದಂತೆ ಇನ್ನಿತರ ಆದಿವಾಸಿ ಜನರಿಗೆ ವಸತಿ ಸೌಕರ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮ ಏನು?

ಶ್ರೀ ವಿ. ಸೋಮಣ್ಣ (ವಸತಿ ಮತ್ತು ಮುಜರಾಯಿ ಸಚಿವರು) :

ಅ) ಹೌದು.

ಆ) ಸದರಿ ಜನಂಗದ ವಸತಿರಹಿತ ಮತ್ತು ನಿವೇಶನರಹಿತ ಫಲಾನುಭವಿಗಳ ವಿವರ ಲಭ್ಯವಿರುವ ಕಾರಣ, ಸದರಿ ಜನಾಂಗದ ಸಮಗ್ರ ಮಾಹಿತಿಯನ್ನು ಭೌತಿಕ ಪರಿಶೀಲನೆ ನಡೆಸಿ ನೀಡಲು ದಿನಾಂಕ: 29-06-2009 ರಂದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪೂರ ಇವರಿಗೆ ಕೋರಲಾಗಿದೆ.

103 ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುವರ್ಣ ಗ್ರಾಮ ಯೋಜನೆಯಡಿಯಲ್ಲಿ ಆಯ್ಕೆಯಾದ 2ನೇ ಹಂತದ ಗ್ರಾಮಗಳ ಸಂಖ್ಯೆ ಎಷ್ಟು (ಕ್ಷೇತ್ರವಾರು ವಿವರಣೆ ನೀಡುವುದು);